DEPARTMENT / SUBJECT:
NAME OF THE NEWS PAPER:
ದಿನಾಂಕ : DATE:

727 ಎಕರೆ ಪ್ರದೇಶದಲ್ಲಿ ಕಾಮಗಾರಿ | 220 ಕೋಟಿ ರು. ವೆಚ್ಚದಲ್ಲಿ ಗ್ರೀನ್ ಫೀಲ್ಡ್ | ಮೊದಲ ಹಂತದಲ್ಲಿ 95 ಕೋಟಿ ರು. ಮೊತ್ತದ ಕಾಮಗಾರಿ ಆರಂಭ

# ವಿಜಯಪುರ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಿಎಂ ಚಾಲನೆ

**ವಿಜಯಪುರ:** ನಗರ ಸಮೀಪ ಮದಭಾವಿ ಬಳಿ ಉದ್ದೇಶಿತ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸೋಮವಾರ ವರ್ಚುವಲ್ ವ್ಯವಸ್ಥೆಯ ಮೂಲಕ ಚಾಲನೆ ನೀಡಿದರು.

ಐತಿಹಾಸಿಕ, ಧಾರ್ಮಿಕ ನೆಲೆಬೀಡಾದ ಹಾಗೂ ತೋಟಗಾರಿಕೆ ಬೆಳೆಗೆ ಪ್ರಸಿದ್ಧವಾದ ವಿಜಯಪುರದಲ್ಲಿ ವಿಮಾನ ನಿಲ್ದಾಣ ನಿರ್ಮಾಣದಿಂದ ಹೆಚ್ಚಿನ ಉದ್ಯೋಗ ಸೃಷ್ಟಿಯಾಗುವ ಜತೆಗೆ ಪ್ರವಾಸೋದ್ಯಮ ಬೆಳವಣಿಗೆಗೆ, ತೋಟಗಾರಿಕೆ ಉತ್ಪನ್ನಗಳ ರಫ್ತಿಗೆ ಅನುಕೂಲವಾಗಲಿದೆ ಎಂದು ಯಡಿಯೂರಪ್ಪ ಹೇಳಿದರು.

ಮದಭಾವಿಯಲ್ಲಿ 727 ಎಕರೆಯಲ್ಲಿ ಖಾಸಗಿ ಸಹಭಾಗಿತ್ವದಲ್ಲಿ 220 ಕೋಟಿ ರು. ಮೊತ್ತದಲ್ಲಿ ಗ್ರೀನ್ ಫೀಲ್ಡ್ ವಿಮಾನ ನಿಲ್ದಾಣ ನಿರ್ಮಾಣವಾಗುತ್ತಿದೆ. ಮೊದಲ ಹಂತದಲ್ಲಿ 95 ಕೋಟಿ ರು. ಮೊತ್ತದಲ್ಲಿ ಕಾಮಗಾರಿ ಆರಂಭವಾಗಲಿದೆ ಎಂದು ಹೇಳಿದರು.

ವಿಜಯಪುರ ವಿಮಾನ ನಿಲ್ದಾಣದ ಅಭಿವೃದ್ಧಿ ಹಾಗೂ ಕಾರ್ಯಾಚರಣೆಯನ್ನು ಕೇಂದ್ರಿಯ ನಾಗರಿಕ ವಿಮಾನಯಾನ ಸಚಿವಾಲಯದ ಭಾರತೀಯ ವಿಮಾನಯಾನ ಪ್ರಾಧಿಕಾರದೊಂದಿಗೆ ಉಡಾನ್



ವಿಜಯಪುರ ನಗರ ಸಮೀಪ ಮದಭಾವಿ ಬಳಿ ಉದ್ದೇಶಿತ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಉದ್ಘಾಟನೆ ಕಾರ್ಯಕ್ರಮವನ್ನು ಡಿಸಿಎಂ ಗೋವಿಂದ ಕಾರಜೋಳ ಉದ್ಘಾಟಿಸಿದರು.

ಯೋಜನೆ ಅಡಿ ಸೇರ್ಪಡಿಸಲು ಕ್ರಮವಹಿಸಲಾಗುತ್ತಿದೆ. ಕಾಮಗಾರಿಯನ್ನು ಎ.ಟಿ.ಆರ್-72 ವಿಮಾನಗಳ ಹಾರಾಟಕ್ಕಾಗಿ ನಿರ್ಮಿಸಲಾಗಿದ್ದು, ಮುಂದೆ ಅದನ್ನು ಏರ್‌ಬಸ್ -320ಗಳ ಹಾರಾಟಕ್ಕಾಗಿ ವಿಸ್ತರಿಸುವಂತೆ ವಿನ್ಯಾಸಗೊಳಿಸಲಾಗಿದೆ. ವಿಮಾನ ನಿಲ್ದಾಣವು ಕಾರ್ಯಾಚರಣೆಯನ್ನು ಪ್ರಾರಂಭಿಸುವುದರಿಂದ, ಜನಸಾಮಾನ್ಯರು ಸಹ ವಿಮಾನಯಾನವನ್ನು ಕೈಗೊಳ್ಳಬಹುದಾಗಿದೆ ಎಂದು ಹೇಳಿದರು.

> **ಸ್ಥಳೀಯ ಯುವಕ-ಯುವತಿಯರಿಗೆ ಉದ್ಯೋಗಾವಕಾಶ, ತೋಟಗಾರಿಕೆ ಮತ್ತು ಕೃಷಿ ಉತ್ಪನ್ನಗಳಿಗೆ ಅಂತಾರಾಷ್ಟ್ರೀಯ ಮಾರುಕಟ್ಟೆ ಸಂಪರ್ಕ ಸೇರಿದಂತೆ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿಯಾಗಲಿದೆ.**
>
> – ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ

ಕಾರ್ಯಕ್ರಮಕ್ಕೆ ಸಾಂಕೇತಿಕವಾಗಿ ಚಾಲನೆ ನೀಡಿ ಮಾತನಾಡಿದ ಉಪಮುಖ್ಯಮಂತ್ರಿ, ಗೋವಿಂದ ಕಾರಜೋಳ, ವಿಜಯಪುರ ಸಮೀಪದ ಬುರಣಾಪೂರ ವ್ಯಾಪ್ತಿಯಲ್ಲಿ ನಿರ್ಮಾಣವಾಗುತ್ತಿರುವ ಈ ವಿಮಾನ ನಿಲ್ದಾಣ ಶ್ರೀಮಂತರ ಓಡಾಟಕ್ಕೆ ಅಲ್ಲ. ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ನೆರವಾಗಲಿದೆ ಎಂದು ಹೇಳಿದರು.

ಕೇಂದ್ರ ಸರಕಾರ 20 ವರ್ಷಗಳ ಹಿಂದೆಯೇ ವಿಜಯಪುರ ಜಿಲ್ಲೆ ತೋಟಗಾರಿಕಾ ಜಿಲ್ಲೆ ಎಂದು ಘೋಷಣೆ ಮಾಡಿತ್ತು. ಉತ್ತಮ ಹವಾಮಾನ, ಭೂಮಿ, ನೀರು, ತೋಟಗಾರಿಕಾ ಕ್ಷೇತ್ರ ಮತ್ತು ನೀರಾವರಿ ಹೊಂದಿರುವುದರಿಂದ ಮುಂಬರುವ ವರ್ಷಗಳಲ್ಲಿ ವಿಜಯಪುರ ಜಿಲ್ಲೆ ಉತ್ತರ ಕರ್ನಾಟಕದಲ್ಲಿಯೇ ಮುಂಚೂಣಿ ಅಭಿವೃದ್ಧಿ ಹೊಂದಿದ ಜಿಲ್ಲೆಯಾಗಲಿದೆ ಎಂದು ತಿಳಿಸಿದರು.

ಶಾಸಕರಾದ ದೇವೇಂದ್ರ ಚವ್ಹಾಣ, ಯಶವಂತರಾಯಗೌಡ ಪಾಟೀಲ, ಸೋಮನಗೌಡ ಪಾಟೀಲ ಸಾಸನೂರು, ಎಂಎಲ್ ಸಿ ಅರುಣ್ ಶಹಾಪೂರ, ಸಂಸದರಾದ ರಮೇಶ ಜಿಗಜಿಣಗಿ, ಬಿ.ವೈ.ರಾಘವೇಂದ್ರ, ಜಿಲ್ಲಾ ಪಂಚಾಯ್ತಿ ಅಧ್ಯಕ್ಷೆ ಸುಜಾತಾ ಕಳ್ಳಿಮನಿ, ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನ ಸಂಸ್ಥೆ ಅಧ್ಯಕ್ಷ ವಿಜುಗೌಡ ಪಾಟೀಲ, ಕರ್ನಾಟಕ ಲಿಂಬೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಶೋಕ ಅಲ್ಲಾಪುರ, ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಾ. ಶೈಲೇಂದ್ರ ಕೆ.ಬೆಲ್ದಾಳೆ, ಜಿಪಂ ಸಿಇಒ ಗೋವಿಂದ ರೆಡ್ಡಿ, ಎಡಿಸಿ ರಮೇಶ ಕಳಸದ, ಎಎಸ್ ಪಿ ಡಾ.ರಾಮ್ ಅರಸಿದ್ದಿ ಇದ್ದರು.

ವಿಜಯಪುರ ತಾಲೂಕಿನ ಬುರಣಾಪುರದಲ್ಲಿ ನಿರ್ಮಾಣವಾಗುತ್ತಿರುವ ವಿಮಾನನಿಲ್ದಾಣಕ್ಕೆ ಶಿಲಾನ್ಯಾಸ ನೆರವೇರಿಸಲಾಯಿತು. ಉಪ ಮುಖ್ಯಮಂತ್ರಿ. ಗೋವಿಂದ ಕಾರಜೋಳ, ಸಂಸದ ರಮೇಶ ಜಿಗಜಿಣಗಿ, ವಿಧಾನ ಪರಿಷತ್ ಸದಸ್ಯ ಅರುಣ ಶಹಾಪುರ, ಶಾಸಕ ಯಶವಂತರಾಯ ಗೌಡ ಪಾಟೀಲ, ದೇವಾನಂದ ಚವ್ಹಾಣ ಉಪಸ್ಥಿತರಿದ್ದರು.